# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 26.10.2011**

## *ದೀಪಾವಳಿ ಹಬ್ಬದ ಶುಭಾಶಯಗಳು*

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಪೂಜ್ಯ ಮಹಾಪೌರರಾದ ಶ್ರೀಮತಿ ಶಾರದಮ್ಮ ಅವರು, ಉಪ ಮಹಾಪೌರರಾದ ಶ್ರೀ ಎಸ್. ಹರೀಶ್ ಅವರು, ಆಡಳಿತ ಪಕ್ಷದ ನಾಯಕರಾದ ಶ್ರೀ ಬಿ.ಆರ್. ನಂಜುಂಡಪ್ಪ ರವರು, ವಿರೋಧ ಪಕ್ಷದ ನಾಯಕರಾದ ಶ್ರೀ ಎಂ. ಉದಯಶಂಕರ್ ಅವರು ಮತ್ತು ಜೆ.ಡಿ.ಎಸ್. ಪಕ್ಷದ ನಾಯಕರಾದ ಶ್ರೀ ಪದ್ಮನಾಭರೆಡ್ಡಿ ಅವರು ಹಾಗೂ ಪಾಲಿಕೆಯ ಆಯುಕ್ತರಾದ ಶ್ರೀ ಸಿದ್ದಯ್ಯ ಅವರು ಬಲಿಪಾಡ್ಯಮಿ-ದೀಪಾವಳಿ ಹಬ್ಬದ ಪ್ರಯುಕ್ತ ನಗರದ ಜನತೆಗೆ ಶುಭಾಶಯಗಳನ್ನು ಕೋರಿದ್ದಾರೆ.

ಬೆಳಕಿನ ಹಬ್ಬ ದೀಪಾವಳಿಯು ಪ್ರತಿಯೊಬ್ಬರ ಮನ, ಮನೆಗಳ ಕತ್ತಲನ್ನು ಕಳೆದು ಹೊಂಬೆಳಕಿನ, ಹೊಂಗನಸಿನ ಸಮೃದ್ಧ ಬದುಕನ್ನು ನೀಡುವ ಹಬ್ಬವಾಗಲಿ. ನಗರದ ಎಲ್ಲ ಜನರಿಗೂ ಸುಖ, ಶಾಂತಿ, ನೆಮ್ಮದಿಗಳನ್ನು ಉಂಟು ಮಾಡುವಂತಾಗಲಿ ಎಂದು ಹಾರೈಸಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002

***ಪತ್ರಿಕಾ ಪ್ರಕಟಣೆ*** **ದಿನಾಂಕ: 26.10.2011**

ದಿನಾಂಕ: 25.10.2011 ರಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರಾದ ಶ್ರೀ ಸಿದ್ದಯ್ಯ ರವರು ಹಾಗೂ ಶಾಂತಿನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ಶ್ರೀ ಎನ್.ಎ. ಹ್ಯಾರಿಸ್ ರವರೊಂದಿಗೆ ಶಾಂತಿನಗರ ವಿಧಾನಸಭಾ ಕ್ಷೇತ್ರದಲ್ಲಿ ತಪಾಸಣೆ ಕೈಗೊಂಡು, ಪರಿಶೀಲನೆ ನಡೆಸಿದರು.

ಶಾಂತಿನಗರ ವಿಧಾನಸಭಾ ಕ್ಷೇತ್ರದ ಕೆಲವೊಂದು ಕೊಳಚೆ ಪ್ರದೇಶದ ವಾಸಿಗಳಿಗೆ ಹಕ್ಕುಪತ್ರ ನೀಡಬೇಕಾಗಿದ್ದು, ಆದರೆ ಕೊಳಚೆ ನಿರ್ಮೂಲನ ಮಂಡಳಿಯವರು ನಿರ್ದಿಷ್ಟ ದಾಖಲಾತಿಗಳಾದ ಚುನಾವಣೆ ಗುರುತಿನ ಚೀಟಿ, ಪಡಿತರ ಚೀಟಿ ಇತ್ಯಾದಿ ದಾಖಲಾತಿಗಳನ್ನು ನಿಗದಿಪಡಿಸಿದ್ದು, ಅರ್ಜಿದಾರರು ಸದರಿ ದಾಖಲಾತಿಗಳನ್ನು ಒದಗಿಸಲು ವಿಫಲರಾದ್ದರಿಂದ ಹಕ್ಕುಪತ್ರ ನೀಡುವ ಪ್ರಕ್ರಿಯೆಗಳು ಸ್ಥಗಿತಗೊಂಡಿರುವುದಾಗಿ ಕಂದಾಯಾಧಿಕಾರಿಗಳು ತಿಳಿಸಿದ್ದು, ಕೂಡಲೇ ಆಯುಕ್ತರು ಕೊಳಚೆ ನಿರ್ಮೂಲನಾ ಮಂಡಳಿ ಆಯುಕ್ತರವರನ್ನು ಭೇಟಿ ಮಾಡಿ, ಕೆಲವು ದಾಖಲಾತಿಗಳಿಗೆ ವಿನಾಯಿತಿ ಪಡೆದು ಹಕ್ಕುಪತ್ರ ವಿತರಿಸಲು ಕ್ರಮ ಜರುಗಿಸುವಂತೆ ಜಂಟಿ ಆಯುಕ್ತರು (ಪೂರ್ವ) ರವರಿಗೆ ಸೂಚಿಸಿದರು.

ಪ್ರಮುಖ ಆರ್ಟೀರಿಯಲ್ ರಸ್ತೆಗಳಲ್ಲಿ ವಾಹನ ಸಂಚಾರದಟ್ಟಣೆ ಇರುವುದರಿಂದ ಪಾದಚಾರಿಗಳಿಗೆ ರಸ್ತೆ ದಾಟಲು ತುಂಬಾ ತೊಂದರೆಯಾಗುತ್ತಿರುವುದರಿಂದ ನಾಲ್ಕು ಸ್ಥಳಗಳಲ್ಲಿ ಸ್ಕೈವಾಕ್ ನಿರ್ಮಿಸಿ, ಪಾದಚಾರಿಗಳಿಗೆ ಅನುಕೂಲ ಕಲ್ಪಿಸಿಕೊಡಬೇಕೆಂದು ಕೋರಿದ್ದು, ಕೂಡಲೇ DBOT ಆಧಾರದ ಮೇಲೆ ಸ್ಕೈವಾಕ್ ನಿರ್ಮಿಸಲು ಮುಂದಿನ ನಗರ ಪಾಲಿಕೆಯ ಸಭೆಯ ಮುಂದೆ ಪ್ರಸ್ತಾವನೆ ಸಲ್ಲಿಸಲು ಕ್ರಮ ವಹಿಸಲು ಮುಖ್ಯ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ) ರವರಿಗೆ ಸೂಚಿಸಿದರು.

ಎಲ್.ಆರ್. ನಗರದಲ್ಲಿರುವ ಹಳೆಯ ಧೋಬಿಘಾಟ್‌ನಲ್ಲಿ ಯಾವುದೇ ಸೌಲಭ್ಯಗಳಿಲ್ಲದೇ ಅವ್ಯವಸ್ಥೆ ಸ್ಥಿತಿಯಲ್ಲಿದ್ದು, ಧೋಬಿಘಾಟ್‌ನ್ನು ಯಾಂತ್ರೀಕರಣಗೊಳಿಸಿ, ಸಕಲ ಸೌಲಭ್ಯಗಳನ್ನು ಒದಗಿಸಲು ಪ್ರಸ್ತಾವನೆ ಮಂಡಿಸುವಂತೆ ಮುಖ್ಯ ಅಭಿಯಂತರರು (ಪೂರ್ವ) ರವರಿಗೆ ಸೂಚಿಸಿದರು. ಅಲ್ಲಿಯವರೆವಿಗೂ ಕನಿಷ್ಠ ಮೂಲಭೂತ ಸೌಲಭ್ಯ ಒದಗಿಸಲು ಕ್ರಮ ಜರುಗಿಸಲು ಸೂಚಿಸಿದರು.

ಸದರಿ ವ್ಯಾಪ್ತಿಯ ಕೆಲವೊಂದು ಪ್ರದೇಶಗಳು ತಗ್ಗು ಪ್ರದೇಶಗಳಾಗಿದ್ದು, ಹೆಚ್ಚಿನ ಮಳೆಯಾದಲ್ಲಿ ಜಲಾವೃತವಾಗುತ್ತಿದ್ದು, ಬೃಹತ್ ನೀರುಗಾಲುವೆ ವತಿಯಿಂದ ಹೂಳೆತ್ತಿ ತಡೆಗೋಡೆ ನಿರ್ಮಿಸಲು ಕ್ರಮ ಜರುಗಿಸಲು ಸೂಚಿಸಿ, ಶಾಂತಿನಗರ ವಿಭಾಗದ ವ್ಯಾಪ್ತಿಯಲ್ಲಿ ಬಹಳಷ್ಟು ಪ್ರದೇಶಗಳು ರಕ್ಷಣಾ ಇಲಾಖೆ ಹಾಗೂ ಇತರೆ ಇಲಾಖೆಗಳಿಗೆ ಸೇರಿದ ಜಾಗಗಳಿದ್ದು, ಮಳೆ ನೀರು ಕೊಯ್ಲು ಪದ್ಧತಿ ಯೋಜನೆಯನ್ನು ಹಾಗೂ ಸಣ್ಣ ಕೆರೆ ಕುಂಟೆಗಳನ್ನು ನಿರ್ಮಿಸಲು ಬಹಳ ಸೂಕ್ತವಾಗಿದ್ದು, ಮುಂದಿನ ಸಾಲಿನ ಮಳೆಗಾಲದೊಳಗೆ ಸಂಪೂರ್ಣವಾಗಿ ಎಲ್ಲಾ ಯೋಜನೆಯನ್ನು ಅನುಷ್ಠಾನಗೊಳಿಸಿ, ಮಳೆ ನೀರು ಬೃಹತ್ ಕಾಲುವೆಗಳಿಗೆ ಸೇರದಂತೆ ಕ್ರಮ ಜರುಗಿಸುವಂತೆ ಮುಖ್ಯ ಅಭಿಯಂತರರು (ಬೃಹತ್ ನೀರುಗಾಲುವೆ) ರವರಿಗೆ ಸೂಚಿಸಿದರು.

ಹೊಸೂರು ರಸ್ತೆ ಅಗಲೀಕರಣ ಕಾಮಗಾರಿ NDRI ನಿಂದ Shaw low ವೃತ್ತದವರೆಗೆ ಸ್ಥಗಿತಗೊಂಡಿದ್ದು, ಕೆಲವು ಖಾಸಗಿ ಮಾಲೀಕರು, ಮಸೀದಿ ಮತ್ತು ರಕ್ಷಣಾ ಇಲಾಖೆಗೆ ಸೇರಿದ ಜಾಗಗಳಿಂದ ಭೂಸ್ವಾಧೀನ ಪಡಿಸಿಕೊಳ್ಳಬೇಕಾಗಿದ್ದರಿಂದ ರಸ್ತೆ ಅಗಲೀಕರಣ ಕಾಮಗಾರಿಯು ಸ್ಥಗಿತಗೊಂಡಿರುವುದಾಗಿ ತಿಳಿಸಿದ್ದು, ಕೂಡಲೇ ಸದರಿ ಆಸ್ತಿಗಳನ್ನು ಭೂಸ್ವಾಧೀನ ಪಡಿಸಿಕೊಂಡು ರಸ್ತೆ ಅಗಲೀಕರಣ ಕಾಮಗಾರಿಯನ್ನು ಪೂರ್ಣಗೊಳಿಸಲು ಮುಖ್ಯ ಅಭಿಯಂತರರು (ಬೃಹತ್ ರಸ್ತೆಗಳು) ರವರಿಗೆ ಸೂಚಿಸಿದರು.

ವಿವೇಕನಗರದಲ್ಲಿರುವ ಮಾಯಾ ಬಜಾರ್ ಕೊಳಚೆ ಪ್ರದೇಶದ ನಿವಾಸಿಗಳು ಸುಮಾರು 80 ವರ್ಷಗಳಿಂದ ವಾಸಿಸುತ್ತಿದ್ದು, ಸದರಿ ಪ್ರದೇಶವು ರಕ್ಷಣಾ ಇಲಾಖೆಗೆ ಸೇರಿರುವುದಾಗಿ ಇಲಾಖೆಯ ಅಧಿಕಾರಿಗಳು ಕ್ಲೈಮ್ ಮಾಡುತ್ತಿದ್ದು, ಇದರಿಂದ ಹಲವಾರು ಸಂದರ್ಭಗಳಲ್ಲಿ ಕೊಳಚೆ ಪ್ರದೇಶದ ನಿವಾಸಿಗಳು ರಕ್ಷಣಾ ಇಲಾಖೆಯ ಅಧಿಕಾರಿಗಳ ವಿರುದ್ಧ ಪ್ರತಿಭಟನೆ ಹಾಗೂ ಗಲಭೆಗಳು ಉಂಟಾಗಿದ್ದು, ಈ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಹಿಡಿಯಲು ರಕ್ಷಣಾ ಇಲಾಖೆಯ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಪರಿಹಾರ ಕಂಡುಕೊಳ್ಳಲು ಜಂಟಿ ಆಯುಕ್ತರು (ಪೂರ್ವ) ರವರಿಗೆ ಸೂಚನೆ ನೀಡಿದರು.

**ಸಾರ್ವಜನಿಕ ಸಂಪರ್ಕಾಧಿಕಾರಿ**